**ಸಾಕ್ಷಿಗೆ ದಿನಾಂಕಃ 03.10.2025 ರಂದು ಕರೆಸಿ ಪ್ರಮಾಣ ವಚನ ಬೋಧಿಸಲಾಯಿತುಃ**

**ಮುಖ್ಯ ವಿಚಾರಣೆ: ಅರ್ಜಿದಾರರ ಪರ ವಕೀಲರಾದ ಶ್ರೀ.NM ರವರಿಂದಃ**

1) ನಾನು ಈ ಪ್ರಕರಣದಲ್ಲಿ ಅರ್ಜಿದಾರನಾಗಿರುತ್ತೇನೆ. ನನ್ನ ಮುಖ್ಯ ವಿಚಾರಣೆ ಸಾಕ್ಷ್ಯಕ್ಕೆ ಬದಲಾಗಿ ನಾನು ಈ ದಿನ ನನ್ನ ಸಾಕ್ಷಿ ಪ್ರಮಾಣ ಪತ್ರವನ್ನು ಸಲ್ಲಿಸುತ್ತಿದ್ದೇನೆ. ಸದರಿ ಪ್ರಮಾಣ ಪತ್ರದಲ್ಲಿ ಬರೆದಿರುವ ಅಂಶಗಳು ಸತ್ಯವಾಗಿರುತ್ತವೆ ಮತ್ತು ಅದನ್ನು ನಾನು ಓದಿ ತಿಳಿದುಕೊಂಡು ನನ್ನ ಸಹಿಯನ್ನು ಮಾಡಿರುತ್ತೇನೆ. ಸದರಿ ಪ್ರಮಾಣ ಪತ್ರವನ್ನು ನನ್ನ ಹೇಳಿಕೆಗೆ ಅನುಸಾರವಾಗಿ ನಮ್ಮ ವಕೀಲರು ಸಿದ್ಧಪಡಿಸಿದ್ದಾರೆ.

2) **ಪೋಲಿಸರಿಗೆ ನೀಡಿರುವ ದೂರನ್ನು** ನಿ.ಪಿ.**1** ಎಂದು, **ಪ್ರಥಮ ವರ್ತಮಾನ ವರದಿ** ಹಾಜರುಪಡಿಸಿದ್ದು ಅದನ್ನು **ನಿ.ಪಿ.2** ಎಂದು, ಗಾಯದ ಪ್ರಮಾಣ ಪತ್ರವನ್ನು ನಿ.ಪಿ.**3** ಎಂದು, **ಕಚ್ಚಾ ನಕ್ಷೆಯನ್ನು** ನಿ.ಪಿ.**4** ಎಂದು, **ಸ್ಥಳ ಪಂಚನಾಮೆಯನ್ನು** ನಿ.ಪಿ.**5** ಎಂದು, **ಐಎಂವಿ ವರದಿಯನ್ನು** ನಿ.ಪಿ.**6** ಎಂದು, ಗಾಯಾಳುವಿನ ಹೇಳಿಕೆಯನ್ನು ನಿ.ಪಿ.**7** ಎಂದು, ಮತ್ತು ಅಂತಿಮ ವರದಿಯನ್ನು ನಿ.ಪಿ.**8** ಎಂದು ಗುರುತಿಸಿದೆ.

3) **Police Intimation** ಫಾರಂ ಅನ್ನು ನಿ.ಪಿ.**9** ಎಂದು ಗುರುತಿಸಿದೆ.
**ಸೂಚನೆಃ** ನಿ.ಪಿ.1 ರಿಂದ ನಿ.ಪಿ.9 ಎಂದು ಗುರುತು ಆಗಿರುವ ದಾಖಲೆಗಳು ಮತ್ತೊಂದು ಪ್ರಕರಣದಿಂದ ಪಡೆದುಕೊಂಡಿರುವಂತಹ ಧೃಡೀಕೃತ

ನಕಲುಗಳು ಆಗಿವೆ.

4) **ಡಿಸ್ಚಾರ್ಜ್ ಸಮ್ಮರಿ ಅನ್ನು** ನಿ.ಪಿ.**10** ಎಂದು ಗುರುತಿಸಿದೆ.

**ಸೂಚನೆ:** ನಿ.ಪಿ.**10** ಎಂದು ಗುರುತು ಆಗಿರುವ ದಾಖಲೆಯು ಒಟ್ಟು **3** ಹಾಳೆಗಳನ್ನು ಒಳಗೊಂಡಿದೆ.

**ಈ ಹಂತದಲ್ಲಿ ಮತ್ತೆ ಕೆಲವು ದಾಖಲೆಗಳನ್ನು ಹಾಜರುಪಡಿಸಲು ಸಾಕ್ಷಿದಾರರು ಸಮಯ ಕೇಳಿದ್ದಾರೆ, ಸಮಯ ನೀಡಿದೆ.**

(ನನ್ನ ಉಕ್ತಲೇಖನದಂತೆ ತೆರೆದ ನ್ಯಾಯಾಲಯದಲ್ಲಿ ಗಣಕಯಂತ್ರದಲ್ಲಿ ಬೆರಳಚ್ಚು ಮಾಡಿಸಲ್ಪಟ್ಟಿದೆ)

**(ಓ.ಹೇ.ಕೇ.ಸ.ಇ)**

**ಮುಖ್ಯ ನ್ಯಾಯಾಧೀಶರು,**
ಲಘು ವ್ಯವಹಾರಗಳ ನ್ಯಾಯಾಲಯ,
ಬೆಂಗಳೂರು.